ಆದಾಯದ ಮೂಲಕ ನೀಡಲಾಗುವುದು?

ಉ. ಹಾಗಿದ್ದರೆ, ಯಾವ ಕಾಲಮಿತಿಯಲ್ಲಿ ಈ ಸಬ್ಸಿಡಿ ಹಣವನ್ನು ಒದಗಿಸಲಾಗುವುದು? ನಿರ್ದಿಷ್ಟ ಕಾಲಮಿತಿ ತಿಳಿಸುವುದು?

ಉತ್ತರ

ಅ. 30-11-2001ರ ಅಂತ್ಯಕ್ಕೆ ಸಣ್ಣ ಕೈಗಾರಿಕೆಗಳಿಗೆ ರೂ.349.56 ಕೋಟಿಗಳು ಸಹಾಯಧನ ನೀಡಲು ಬಾಕಿ ಇರುತ್ತದೆ.

ಆ. ಸರ್ಕಾರವು 2001-02ನೇ ಸಾಲಿನಲ್ಲಿ ರೂ.25.00 ಕೋಟಿಗಳನ್ನು ಆಯವ್ಯಯದಲ್ಲಿ ಒದಗಿಸಿದ್ದು ರೂ.16.65 ಕೋಟಿ ಈಗಾಗಲೇ ಬಿಡುಗಡೆ ಆಗಿದೆ.

ಇ. ಸರ್ಕಾರದಿಂದ ಆಯವ್ಯಯದಲ್ಲಿ ಒದಗಿಸಿರುವಂತೆ ಕಾಲಾನುಕಾಲಕ್ಕೆ ಸಹಾಯಧನವನ್ನು ಬಿಡುಗಡೆ ಮಾಡಲಾಗುತ್ತಿದೆ. ಕಳೆದ ಮಾರ್ಚ್ ತಿಂಗಳಿನಲ್ಲಿ (2000-01) ರೂ.8.75 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ಈ. ಸರ್ಕಾರವು 2001-02ನೇ ಸಾಲಿನಲ್ಲಿ ರೂ.25.00 ಕೋಟಿಗಳನ್ನು ಆಯವ್ಯಯದಲ್ಲಿ ಒದಗಿಸಿದ್ದು ರೂ.16.65 ಕೋಟಿ ಈಗಾಗಲೇ ಬಿಡುಗಡೆ ಆಗಿದೆ. ಬಾಕಿ ಸಹಾಯಧನ ಬಿಡುಗಡೆ ಮಾಡಲು ಪ್ರಯತ್ನಿಸಲಾಗುವುದು.

ಉ. ಆದಷ್ಟು ಬೇಗನೆ ಸಹಾಯಧನವನ್ನು ಬಿಡುಗಡೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಕೈಮಗ್ಗ ನೇಕಾರರ ಸಮಸ್ಯೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 431(748)

ಸದಸ್ಯರ ಹೆಸರು : ಶ್ರೀ ಪಾಟೀಲ್ ಶಿವಾನಂದ ಸಿದ್ದರಾಮಗೌಡ(ತಿಕೋಟ)

ಉತ್ತರಿಸುವ ಸಚಿವರು : ಶ್ರೀ ಎಂ.ಮಹದೇವ್(ರೇಷ್ಮೆ ಮತ್ತು ಜವಳಿ ಸಚಿವರು)

ಪ್ರಶ್ನೆ

ಅ) ರಾಜ್ಯದಲ್ಲಿ ಕೈಮಗ್ಗದಿಂದಲೂ ಬಟ್ಟೆ ಉತ್ಪಾದನೆಯಾಗುತ್ತಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ, ರಾಜ್ಯದ ಅದರಲ್ಲೂ ಉತ್ತರ ಕರ್ನಾಟಕದಲ್ಲಿ ಕೈಮಗ್ಗ ನೇಕಾರರ ಪರಿಸ್ಥಿತಿ ಯಾವ ಮಟ್ಟದಲ್ಲಿ ಇದೆ ಎಂಬುದನ್ನು ಸರ್ಕಾರ ಅರಿತಿದೆಯೇ? ಹಾಗಿದ್ದರೆ, ಅದಕ್ಕೆ ಸರ್ಕಾರ ಕೈಗೊಂಡ ಕ್ರಮವೇನು?

ಇ) ನೇಕಾರಿಕೆಯಲ್ಲಿ ಲಾಭವಿಲ್ಲದೇ ನೇಕಾರನ ಜೀವನ ತುಂಬಾ ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈಗಾಗಲೇ ಅನೇಕ ಕಡೆ ನೇಕಾರರು ಆತ್ಮಹತ್ಯೆ ಮಾಡಿಕೊಂಡ ಬಗ್ಗೆ ವರದಿಗಳು ಬಂದಿದೆಯೇ?

ಈ) ಉತ್ಪಾದಿಸಿದ ಬಟ್ಟೆಗೆ ಸರಿಯಾದ ಬೆಲೆ ಸಿಗುವಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಉ) ನೇಕಾರರ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಯೋಚಿಸುತ್ತಿದೆಯೇ? ಹಾಗಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?

ಉತ್ತರ

ಅ) ಹೌದು.

ಆ) ಕೈಮಗ್ಗ ನೇಕಾರರ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬಂದಿರುತ್ತದೆ. ರಾಜ್ಯದಲ್ಲಿ ಅದರಲ್ಲೂ, ಉತ್ತರ ಕರ್ನಾಟಕ ಭಾಗದಲ್ಲಿನ ನೇಕಾರರ ಪರಿಸ್ಥಿತಿಯನ್ನು ಸುಧಾರಿಸುವ ಸಲುವಾಗಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ಹಲವಾರು ನೇಕಾರರ ಸಹಕಾರ ಸಂಘಗಳನ್ನು ಸ್ಥಾಪಿಸಲಾಗಿದೆ.

ಇ) ನೇಕಾರರ ಜೀವನ ನಿರ್ವಹಣೆ ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ನೇಕಾರರು ಆತ್ಮಹತ್ಯೆ ಮಾಡಿಕೊಂಡ ಬಗ್ಗೆ ವರದಿಗಳು ಬಂದಿರುತ್ತದೆ. ನೇಕಾರರು ವೈಯಕ್ತಿಕ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ತಿಳಿದು ಬಂದಿದೆ.

ಈ) ಸಹಕಾರ ಸಂಘ: ಮಹಾಮಂಡಳ: ಕೈಮಗ್ಗ ಅಭಿವೃದ್ಧಿ ನಿಗಮದ ಮುಖಾಂತರ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವುದರ ಮುಖಾಂತರ ಉತ್ಪಾದಿಸಿದ ಉತ್ಪನ್ನಗಳಿಗೆ ಸರಿಯಾದ ಬೆಲೆ ಸಿಗುವ ವ್ಯವಸ್ಥೆಯನ್ನು ಸರ್ಕಾರವು ಮಾಡಿರುತ್ತದೆ.

ಉ) ನೇಕಾರರಿಗೆ ಸರಿಯಾದ ಕಚ್ಚಾ ಮಾಲು ದೊರೆಯುವುದು ಮತ್ತು ಸರಿಯಾದ ಮಾರುಕಟ್ಟೆ ಸೌಲಭ್ಯ ದೊರೆಯುವುದರ ಬಗ್ಗೆ ಸಮಸ್ಯೆಗಳು ಇರುತ್ತವೆ. ನೇಕಾರರ ಸಮಸ್ಯೆಯನ್ನು ಪರಿಹರಿಸಲು ಸರ್ಕಾರವು ಯೋಚಿಸಿರುತ್ತದೆ. ಸರ್ಕಾರವು ಈ ಕೆಳಗಿನ

ಪ್ರಯುಕ್ತ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ ಅವರ ಸಮಸ್ಯೆ ನಿವಾರಿಸುತ್ತಿದೆ.

(1) ದೀನ್‌ದಯಾಳ್ ಕೈಮಗ್ಗ ಪ್ರೋತ್ಸಾಹನ ಯೋಜನೆ.

(2) ವಿದ್ಯಾವಿಕಾಸ ಯೋಜನೆ.

ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ಮಂಜೂರಾತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 433(265)

ಸದಸ್ಯರ ಹೆಸರು : ಶ್ರೀ ಪ್ರಭಾಕರ ಬಂಗೇರ.ಕೆ.(ಬೆಳ್ತಂಗಡಿ)

ಉತ್ತರಿಸುವ ಸಚಿವರು : ಶ್ರೀ ಕಾಗೋಡು ತಿಮ್ಮಪ್ಪ(ಸಮಾಜ ಕಲ್ಯಾಣ ಸಚಿವರು)

ಪ್ರಶ್ನೆ

ಅ) ಬೆಳ್ತಂಗಡಿ ತಾಲ್ಲೂಕಿನ ಅರಸಿನಮಕ್ಕಿ ಕೊಕ್ಕಡ, ಸವಣಾಲು, ಗೇರುಕಟ್ಟೆ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದ್ದಲ್ಲಿ ಹಾಸ್ಟೆಲ್‌ಗಳನ್ನು ಮಂಜೂರು ಮಾಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಉತ್ತರ

ಅ ಮತ್ತು ಆ) ಹಾಲಿ ಬೆಳ್ತಂಗಡಿ ತಾಲ್ಲೂಕಿನಲ್ಲಿ 7 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು, 3 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಇರುತ್ತವೆ.

ಪ್ರತಿ ವರ್ಷ ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಂತೆ ರಾಜ್ಯದಾದ್ಯಂತ ಸಾಕಷ್ಟು ಬೇಡಿಕೆಗಳು ಬರುತ್ತಿರುತ್ತವೆ. ಈ ಸ್ಥಳಗಳಲ್ಲಿ ಹೊಸ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಅವಶ್ಯಕತೆ, ಸೂಕ್ತ ಬಾಡಿಗೆ ಕಟ್ಟಡದ ಲಭ್ಯತೆ, ಸ್ವಂತ ಕಟ್ಟಡ ನಿರ್ಮಿಸಲು ನಿವೇಶನದ ಲಭ್ಯತೆ ಹಾಗೂ ಹಣದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಅಗತ್ಯ ಸ್ಥಳಗಳಲ್ಲಿ ಆದ್ಯತೆಯ ಮೇರೆಗೆ ಹೊಸ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಲು ಪರಿಶೀಲಿಸಲಾಗುವುದು.